ಕಂದಾಯ ಇಲಾಖೆ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ದಾವಣಗೆರೆ ಜಿಲ್ಲೆ.


ಜಿಲ್ಲಾಡಳಿತ ಭವನ, ದಾವಣಗೆರೆ
deo.davanagere@gmail.com

| ದೂರವಾಣಿ ಸಂಖ್ಯೆ | ಜಿಲ್ಲಾಧಿಕಾರಿ | ಅಪರ ಜಿಲ್ಲಾಧಿಕಾರಿ | ಆಡಳಿತ ಶಾಖೆ |
|---|---|---|---|
| ದೂರವಾಣಿ | 08192-234640 | 257778 | 255118 |
| ಫ್ಯಾಕ್ಸ್ | 08192-272957 | 257778 | 255118 |


ನಂ. ಗ್ರಾಲೆ/ಸಿಬ್ಬಂದಿ/ಸಿಆರ್/115 /2014-15 ದಿನಾಂಕ : 28.09.2015

## -: ಅಧಿಸೂಚನೆ :-

ವಿಷಯ: ದಾವಣಗೆರೆ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂ. ಆರ್‌ಡಿ 299 ಬಿಎಸ್‌ಸಿ 2006 ದಿ:3.2.2009
2) ಸರ್ಕಾರದ ಅಧಿಸೂಚನೆ ಸಂ. ಆರ್‌ಡಿ 299 ಬಿಎಸ್‌ಸಿ 2006 ದಿ: 24.7.2009
3) ಸರ್ಕಾರದ ಪತ್ರ ಸಂ. ಕಂಇ 04 ಬಿಎಸ್‌ಸಿ 2011 ದಿ:25.2.2011

***

ದಾವಣಗೆರೆ ಜಿಲ್ಲೆಯ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹುದ್ದೆಗಳ ಮೀಸಲಾತಿ ಇತ್ಯಾದಿ ವಿವರ ಈ ಕೆಳಕಾಣಿಸಿದಂತಿದೆ.

1. **ಮೀಸಲಾತಿ ವರ್ಗೀಕರಣ :**

1ನೇ ಸೈಕಲ್‌ನ ರೋಸ್ಟರ್ ಬಿಂದು 87 ರಿಂದ 100 ರವರೆಗೆ ಹಾಗೂ 2ನೇ ಸೈಕಲ್‌ನ ರೋಸ್ಟರ್ ಬಿಂದು 1 ರಿಂದ 11 ರವರೆಗೆ ಒಟ್ಟು 25 ಗ್ರಾಮಲೆಕ್ಕಿಗ ಹುದ್ದೆಗಳಿಗೆ ವರ್ಗೀಕರಿಸಲಾಗಿದೆ.

| ಕ್ರಸಂ | ಮೀಸಲಾತಿ | ಸಾಮಾನ್ಯ | ಕನ್ನಡ ಮಾಧ್ಯಮ | ಮಹಿಳೆ | ಯೋಜನಾ ನಿರಾಶ್ರಿತರು | ಗ್ರಾಮೀಣ | ಮಾಜಿ ಸೈನಿಕ | ಅಂಗವಿಕಲ | **ಒಟ್ಟು** |
|---|---|---|---|---|---|---|---|---|---|
| 1. | ಪ.ಜಾ | - | 1 | 1 | 1 | 1 | - | - | **4** |
| 2. | ಪ.ಪಂ. | - | - | - | - | - | - | 1 | **1** |
| 3. | ಪ್ರ.1 | - | - | 1 | - | - | - | - | **1** |
| 4. | ಪ್ರ-2 (ಎ) | - | 1 | 1 | - | 1 | - | - | **3** |
| 5. | ಪ್ರ-2(ಬಿ) | - | - | 1 | - | - | - | 1 | **2** |
| 6. | ಪ್ರ-3(ಎ) | - | - | - | - | - | - | 1 | **1** |
| 7. | ಪ್ರ-3(ಬಿ) | - | - | 1 | - | - | - | - | **1** |
| 8. | ಸಾಮಾನ್ಯ | 2 | 1 | 4 | - | 3 | 1 | 1 | **12** |
| | **ಒಟ್ಟು** | **2** | **3** | **9** | **1** | **5** | **1** | **4** | **25** |

2. **ಅರ್ಜಿಯನ್ನು ಸಲ್ಲಿಸುವ ವಿಧಾನ:**

ಎ. ಅರ್ಜಿಯನ್ನು ಆನ್-ಲೈನ್ (online) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿಯನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ. ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಬಿ. ಅರ್ಜಿಗಳನ್ನು ದಿ: 5.10.2015 ರಿಂದ 4.11.2015ರೊಳಗೆ ಸಲ್ಲಿಸತಕ್ಕದ್ದು.**

ಸಿ. ಅಭ್ಯರ್ಥಿಯು ದಾವಣಗೆರೆ ಜಿಲ್ಲಾ ಕಂದಾಯ ಘಟಕದ ಅಧಿಕೃತ ವೆಬ್-ಸೈಟ್ http://davanagere-va.kar.nic.in ತೆರೆದು ಕಂಪ್ಯೂಟರ್ ಪರದೆಯ ಮೇಲೆ Application Form ಬಟನ್ ಒತ್ತಿ ಅರ್ಜಿಯನ್ನು ಭರ್ತಿ ಮಾಡಬೇಕು. ನಂತರ ಅಭ್ಯರ್ಥಿಯು passport ಅಳತೆಯ ಭಾವಚಿತ್ರವನ್ನು Browse ಮಾಡಿ (Jpg,, / GIF) Submit Button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number)ನೊಂದಿಗೆ ಸ್ವೀಕೃತಿ (Acknowledgement slip) ಹಾಗೂ ಅಂಚೆ ಕಚೇರಿಯ ದ್ವಿಪ್ರತಿ ಚಲನ್ ಕಂಪ್ಯೂಟರ್ ಪರದೆ ಮೇಲೆ ಸೃಷ್ಟಿಯಾಗುತ್ತದೆ. ಹೀಗೆ ಅರ್ಜಿಯನ್ನು ಆನ್-ಲೈನ್ ಮೂಲಕ ಸಲ್ಲಿಸಿದ ನಂತರ ದ್ವಿಪ್ರತಿ ಚಲನ್‌ನಲ್ಲಿ ಅರ್ಜಿ ಶುಲ್ಕವನ್ನು ನಿಗದಿತ ಸೇವಾ ಶುಲ್ಕದೊಂದಿಗೆ e-payment ಸೌಲಭ್ಯವಿರುವ ಯಾವುದೇ ಅಂಚೆ ಕಚೇರಿಯಲ್ಲಿ ಶುಲ್ಕವನ್ನು ಪಾವತಿಸಬೇಕು. ಅಭ್ಯರ್ಥಿಗಳು ಸ್ವೀಕೃತಿ ಸ್ಲಿಪ್‌ಅನ್ನು ಮತ್ತು ಶುಲ್ಕ ಪಾವತಿಸಿದ ಚಲನ್‌ನ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. ಇನ್ನೊಂದು ಚಲನ್ ಪ್ರತಿ ಅಂಚೆ ಕಚೇರಿ ಬಳಿ ಇರುತ್ತದೆ. ಈ ದಾಖಲೆಗಳನ್ನು ತಾತ್ಕಾಲಿಕ ಪಟ್ಟಿಯಲ್ಲಿ ಪ್ರಕಟಿಸಲಾಗುವ ಅಭ್ಯರ್ಥಿಗಳು ಪರಿಶೀಲನೆಗೆ ಹಾಜರುಪಡಿಸತಕ್ಕದ್ದು. ಅಂಚೆ ಕಚೇರಿಯಲ್ಲಿ ನಿಗದಿತ ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ: 4.11.2015 ಆಗಿರುತ್ತದೆ. ನಗದು, ಡಿ.ಡಿ., ಪೋಸ್ಟಲ್ ಆರ್ಡರ್ ಮತ್ತು ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಅಲ್ಲದೇ ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೆ ಯಾವುದೇ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

3. **ಅರ್ಜಿ ಶುಲ್ಕ :**

ಸರ್ಕಾರದ ಸುತ್ತೋಲೆ ಸಂ. ಕಂಇ 34 ಪ್ರಕಾ 2009, ದಿನಾಂಕ 26.9.2009ರಂತೆ

| | |
|---|---|
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಮಹಿಳೆ | ರೂ.100/- |
| ಇತರೆ ವರ್ಗ ಮತ್ತು ಸಾಮಾನ್ಯ | ರೂ.200/- |

4. **ಅರ್ಹತಾ ಷರತ್ತುಗಳು :**

ಎ) ಭಾರತೀಯ ನಾಗರೀಕನಾಗಿರತಕ್ಕದ್ದು.

ಬಿ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ / ಮಾನಸಿಕ ನ್ಯೂನ್ಯತೆಯಿಂದ ಮುಕ್ತರಾಗಿರತಕ್ಕದ್ದು.

ಸಿ) ಅಭ್ಯರ್ಥಿಯು ಈ ಹಿಂದೆ ಯಾವುದೇ ಸರ್ಕಾರದ ಸೇವೆಯಿಂದ ವಜಾಗೊಂಡಿರಬಾರದು.

5. **ಶೈಕ್ಷಣಿಕ ವಿದ್ಯಾರ್ಹತೆ :**

ದ್ವಿತೀಯ ಪಿ.ಯು.ಸಿ. ಅಥವಾ ಸಿ.ಬಿ.ಎಸ್.ಸಿ/ ಐ.ಸಿ.ಎಸ್.ಸಿ. ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. (ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕ:4.11.2015ಕ್ಕೆ ಮುಂಚಿತವಾಗಿ ತೇರ್ಗಡೆ ಹೊಂದಿ ಅಂಕಪಟ್ಟಿಯನ್ನು

ಪಡೆದುಕೊಂಡಿರತಕ್ಕದ್ದು) ಇತರೆ ತತ್ಸಮಾನ ವಿದ್ಯಾರ್ಹತೆಯನ್ನು ಪರಿಗಣಿಸಲು ನಿಯಮದಲ್ಲಿ ಅವಕಾಶವಿರುವುದಿಲ್ಲ ಎಂಬುದನ್ನು ಸ್ಪಷ್ಟಪಡಿಸಿದೆ (ದ್ವಿತೀಯ ಪಿ.ಯು.ಸಿ. ಅಥವಾ ಸಿ.ಬಿ.ಎಸ್.ಸಿ. / ಐ.ಸಿ.ಎಸ್.ಸಿ.ಯ 12ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿ ಹೊರತುಪಡಿಸಿದಂತೆ ಬೇರೆ ತತ್ಸಮಾನ ವಿದ್ಯಾರ್ಹತೆ ಹೊಂದಿರುವುದಾಗಿ ಸಲ್ಲಿಸುವ ಆನ್‌ಲೈನ್ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯನ್ನು ನೀಡದೇ ತಿರಸ್ಕರಿಸಲಾಗುವುದು)

6. **(1)ವೇತನ ಶ್ರೇಣಿ** : 11600–200–12000–250–13000–300–14200–350–15600–400–17200–450–19000–500–21000

**(2) ವಯೋಮಿತಿ** : ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 4.11.2015ಕ್ಕೆ ಅಭ್ಯರ್ಥಿಯು ಈ ಕೆಳಕಂಡಂತೆ ವಯೋಮಿತಿ ಹೊಂದಿರತಕ್ಕದ್ದು.

ಎ)ಕನಿಷ್ಠ 18 ವರ್ಷ

ಬಿ)ಗರಿಷ್ಠ ವಯೋಮಿತಿ

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| ಹಿಂದುಳಿದ ವರ್ಗ : 2ಎ, 2ಬಿ, 3ಎ, 3ಬಿ | 38 ವರ್ಷ |
| ಪ.ಜಾತಿ/ಪ.ಪಂಗಡ/ಪ್ರವರ್ಗ–1 | 40 ವರ್ಷ |

ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ.) ಅಥವಾ ಕ್ಯೂಮ್ಯುಲೇಟಿವ್ ರೆಕಾರ್ಡ್‌ನಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 6 ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದಲ್ಲಿ ಹೆಚ್ಚಿಸಲು ಅವಕಾಶವಿದ್ದು, ಸದರಿ ದಾಖಲೆಗಳನ್ನು ಮೂಲ ದಾಖಲೆಗಳ ಪರಿಶೀಲನೆ ವೇಳೆ ಹಾಜರುಪಡಿಸತಕ್ಕದ್ದು. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 6 ರಂತೆ ಗರಿಷ್ಠ ವಯೋಮಿತಿಯನ್ನು ಈ ಮುಂದಿನ ಪ್ರಕರಣಗಳಲ್ಲಿ ಮುಂದೆ ಹೇಳಿರುವಷ್ಟರ ಮಟ್ಟಿಗೆ ಹೆಚ್ಚಿಸಲು ಅವಕಾಶವಿದೆ.

ಸಿ) ಸರ್ಕಾರದ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿತವಾಗಿದ್ದು ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಅಂತಹ ಹುದ್ದೆಯನ್ನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ಅಥವಾ (ಹತ್ತು) ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಡಿ) ಮಾಜಿ ಸೈನಿಕನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ವರ್ಷಗಳು ಮತ್ತು ಇದಕ್ಕೆ ಕೇಂದ್ರದ ಸಶಸ್ತ್ರ ಪಡೆಗಳಲ್ಲಿ ಅವನು ಸೇವೆ ಸಲ್ಲಿಸಿರುವಷ್ಟು ವರ್ಷಗಳನ್ನು ಸೇರಿಸಬೇಕು.

ಇ) ಪೂರ್ಣಾವಧಿ ಕೆಡೆಟ್ ಇನ್‌ಸ್ಟ್ರಕ್ಟರ್ ಆಗಿ ಸೇವೆ ಸಲ್ಲಿಸಿದ ತರುವಾಯ, ರಾಷ್ಟ್ರೀಯ ಕೆಡೆಟ್ ದಳದಿಂದ ಬಿಡುಗಡೆ ಮಾಡಿದ ಅಭ್ಯರ್ಥಿಯ ಸಂದರ್ಭದಲ್ಲಿ ಹಾಗೆ ಕೆಡೆಟ್ ಇನ್‌ಸ್ಟ್ರಕ್ಟರಾಗಿ ಆತನು ಸೇವೆ ಸಲ್ಲಿಸಿರುವಷ್ಟು ವರ್ಷಗಳು

ಎಫ್) ರಾಜ್ಯ ಸರ್ಕಾರ ಪ್ರಾಯೋಜಿತ ಗ್ರಾಮೀಣ ಕೈಗಾರೀಕರಣ ಯೋಜನೆಯಲ್ಲಿ ನೇಮಕಗೊಂಡ ಗ್ರಾಮ ಸಮೂಹ ಇನ್‌ಸ್ಪೆಕ್ಟರ್‌ರಾಗಿ ಆತ ಸೇವೆ ಸಲ್ಲಿಸಿರುವಷ್ಟು ವರ್ಷಗಳು

ಜಿ) ಅಂಗವಿಕಲನಾಗಿರುವ ಸಂದರ್ಭದಲ್ಲಿ ಹತ್ತು ವರ್ಷಗಳು

ಹೆಚ್) ಈ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಹುದ್ದೆಯನ್ನು ಧಾರಣೆ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥ ಹುದ್ದೆಯನ್ನು ಆತನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ವರ್ಷಗಳು ಅಥವಾ ಐದು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಐ) ಅಭ್ಯರ್ಥಿ ವಿಧವೆಯಾಗಿದ್ದಲ್ಲಿ ಹತ್ತು ವರ್ಷಗಳು

ಜೆ) ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯಾಗಿದ್ದಲ್ಲಿ ಹತ್ತು ವರ್ಷಗಳು

**7. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು :**

**ಅ) ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಕಾಣಿಸಿರುವಂತೆ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.**

ಎ. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ–ಡಿ

ಬಿ. ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ–ಇ

ಸಿ. ಹಿಂದುಳಿದ ವರ್ಗ– 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ–ಎಫ್

ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರಗಳು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ: 4.11.2015ರ ಒಳಗೆ ಪಡೆದಿರಬೇಕು.

**ಆ)** ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಜಾತಿ ಪ್ರಮಾಣ ಪತ್ರದ ಬಗ್ಗೆ ಅಭ್ಯರ್ಥಿಗೆ ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು, ಜಾತಿ ಪರಿಶೀಲನಾ ಸಮಿತಿ ಇವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

**8. ಗ್ರಾಮೀಣ ಅಭ್ಯರ್ಥಿ:**

ಎ)ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳಂತೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರಬೇಕು.

ಬಿ)ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ 2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ದಿನಾಂಕ: 4.11.2015ರ ಒಳಗಾಗಿ ಪಡೆದಿಟ್ಟುಕೊಂಡಿರತಕ್ಕದ್ದು.

ಸಿ) ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಮೀಸಲಾತಿ ಪ್ರಮಾಣ ಪತ್ರದ ಜೊತೆ ನಮೂನೆ-1ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಶೀಲ್ದಾರರಿಂದ ದಿನಾಂಕ: 4.11.2015ರ ಒಳಗೆ ಪಡೆದಿರಬೇಕು.

ಸೂಚನೆ: ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ-2ರಲ್ಲಿನ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು (ಈ ಪ್ರಮಾಣ ಪತ್ರ ದಿ:4.11.2015ರೊಳಗೆ ಪಡೆದಿರಬೇಕು)

9. **ಕನ್ನಡ ಮಾಧ್ಯಮ ಅಭ್ಯರ್ಥಿ** : ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು (ಈ ಪ್ರಮಾಣ ಪತ್ರ ದಿ: 4.11.2015 ರೊಳಗೆ ಪಡೆದಿರಬೇಕು)

10. **ಯೋಜನಾ ನಿರಾಶ್ರಿತ ಅಭ್ಯರ್ಥಿ** : ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ನಿಗದಿಪಡಿಸಲಾದ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ದಿ:4.11.2015 ರೊಳಗೆ ಪಡೆದಿರಬೇಕು.

11. **ಅಂಗವಿಕಲರ ಮೀಸಲಾತಿ ಬಗ್ಗೆ** : ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ)ನಿಯಮಗಳು 1977ರ ನಿಯಮ 9(1-ಎ)ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್ ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡ 5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಅಧಿಸೂಚನೆ ಸಂ. ಡಿಪಿಎಆರ್ 52 ಎಸ್‌ಎಸ್‌ಆರ್ 99 ದಿ:23.6.2012ರಂತೆ ಗ್ರಾಮಲೆಕ್ಕಿಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕೆಳಕಾಣಿಸಿದ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ.

    1.ಕುಷ್ಠ ರೋಗದಿಂದ ಗುಣಮುಖರಾದವರು (Leprosy Cured) 2.ಶ್ರವಣದೋಷವುಳ್ಳವರು (Hearing Impaired) 3. ಚಲನವಲನ ವೈಕಲ್ಯ ಇರುವವರು (Loco motor Disability)
    4. ಮಾನಸಿಕ ಅಸ್ವಸ್ಥತೆಯಿಂದ ಗುಣಮುಖರಾದವರು (Mentally ill)

    ಸರ್ಕಾರದ ಆದೇಶ ಸಂ. ಸಿಆಸುಇ 128 ಸೇನೆವಿ 2006 ದಿ:1.8.2009ರಂತೆ ಅಂಗವಿಕಲ ಮೀಸಲಾತಿಯಡಿ ಸಾಮಾನ್ಯ-44ನೇ ಬಿಂದುವನ್ನು ಶ್ರವಣ ದೋಷವುಳ್ಳವರಿಗೆ ಮೀಸಲಿರಿಸಲಾಗಿದೆ. ಸದರಿ ಅಂಗವಿಕಲ ಮೀಸಲಾತಿಯಡಿ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಬೇರೆ ಅಂಗವಿಕಲತೆ ಇರುವವರನ್ನು ಆಯ್ಕೆಗೆ ಪರಿಗಣಿಸಲಾಗುವುದು.

ಈ ಮೇಲಿನ ಅಂಗವಿಕಲರು ಹೊರತುಪಡಿಸಿ ಇತರ ದೈಹಿಕ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರಗಳನ್ನು ದಿ: 4.11.2015ರ ಒಳಗೆ ಪಡೆದುಕೊಂಡಿರತಕ್ಕದ್ದು.

**ಸೂಚನೆ :** ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ: 4.11.2015ರೊಳಗೆ ಪಡೆದಿರಬೇಕು. ತಾತ್ಕಾಲಿಕ ಪರಿಶೀಲನಾ ಪಟ್ಟಿಯಲ್ಲಿ ಪ್ರಕಟಗೊಂಡ ಅಭ್ಯರ್ಥಿಗಳು ಮಾತ್ರ ನೇಮಕಾತಿ ಪ್ರಾಧಿಕಾರದ ಸೂಚಿಸುವ ದಿನಾಂಕದಂದು ಮೂಲ ಪ್ರಮಾಣ ಪತ್ರಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು. ಮೂಲ ಪ್ರಮಾಣ ಪತ್ರಗಳನ್ನು ಹಾಜರುಪಡಿಸದಿರುವ ಅಭ್ಯರ್ಥಿಗಳ ಅರ್ಜಿಯನ್ನು ಯಾವುದೇ ಸೂಚನೆಯನ್ನು ನೀಡದೆ ತಿರಸ್ಕೃತಗೊಳಿಸಲಾಗುವುದು.

12. **ಆಯ್ಕೆ ವಿಧಾನ** : ಕರ್ನಾಟಕ ಜನರಲ್ ಸರ್ವೀಸಸ್ (Revenue Subordinate Branch) (Cadre & Recruitment) (ತಿದ್ದುಪಡಿ) ನಿಯಮಗಳು 2008 ಮತ್ತು 2009 ಹಾಗೂ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ಪ್ರಕಾರ ಅಭ್ಯರ್ಥಿಯನ್ನು ದ್ವಿತೀಯ ಪಿ.ಯು.ಸಿ. ಪರೀಕ್ಷೆ ಅಥವಾ ಸಿ.ಬಿ.ಎಸ್.ಸಿ. ಅಥವಾ ಐ.ಸಿ.ಎಸ್.ಇ. ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ (on merit) ಆಧಾರದ ಮೇಲೆ ಆಯಾಯಾ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು.

13. **ಪ್ರಮುಖ ಸೂಚನೆಗಳು :**

ಪ್ರಕಟಗೊಳ್ಳುವ ತಾತ್ಕಾಲಿಕ ಪರಿಶೀಲನಾ ಪಟ್ಟಿಯಲ್ಲಿನ ಅಭ್ಯರ್ಥಿಗಳು ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ದಿನಾಂಕದಂದು ಪರಿಶೀಲನೆಗೆ ಹಾಜರ್ ಪಡಿಸತಕ್ಕದ್ದು ಹಾಗೂ ಮೂಲ ಪ್ರಮಾಣ ಪತ್ರಗಳೊಂದಿಗೆ ಪತ್ರಾಂಕಿತ ಅಧಿಕಾರಿಯಿಂದ ದೃಢೀಕರಿಸಲ್ಪಟ್ಟ 1 ಸೆಟ್ ಜೆರಾಕ್ಸ್ ನಕಲನ್ನು ಜೊತೆಯಲ್ಲಿ ಹಾಜರುಪಡಿಸತಕ್ಕದ್ದು.

- ದ್ವಿತೀಯ ಪಿ.ಯು.ಸಿ. ಪರೀಕ್ಷೆ ಅಥವಾ ಸಿ.ಬಿ.ಎಸ್.ಇ. ಅಥವಾ ಐ.ಸಿ.ಎಸ್.ಇ. ನಡೆಸುವ 12ನೇ ತರಗತಿ ಪರೀಕ್ಷೆಯ ಅಂಕಪಟ್ಟಿ / ಪ್ರಮಾಣ ಪತ್ರ
- ಹುಟ್ಟಿದ ದಿನಾಂಕ ಸಮರ್ಥನೆಗಾಗಿ ಎಸ್.ಎಸ್.ಎಲ್.ಸಿ ತೇರ್ಗಡೆ ಪ್ರಮಾಣ ಪತ್ರ / ವರ್ಗಾವಣೆ ಪ್ರಮಾಣ ಪತ್ರ / ಕ್ಯೂಮ್ಯುಲೇಟಿವ್ ದಾಖಲೆ
- ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಹಾಲಿ ಸೇವೆ ಸಲ್ಲಿಸಿರುತ್ತಿರುವ ಸಕ್ಷಮ ಪ್ರಾಧಿಕಾರಿಯಿಂದ ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿಯನ್ನು ಸಲ್ಲಿಸಲು ನಿರಾಕ್ಷೇಪಣ ಪ್ರಮಾಣ ಪತ್ರ (No Objection Certificate) ಪಡೆದಿರಬೇಕು
- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಭ್ಯರ್ಥಿಗಳು (ನಮೂನೆ–ಡಿ) ಮತ್ತು ಪ್ರವರ್ಗ–1 ಅಭ್ಯರ್ಥಿಗಳು (ನಮೂನೆ–ಇ) ಹಾಗೂ ಹಿಂದುಳಿದ ವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು (ನಮೂನೆ–ಎಫ್) ಜಾತಿ ಪ್ರಮಾಣ ಪತ್ರ ಪಡೆದಿರತಕ್ಕದ್ದು.
- ಯೋಜನಾ ನಿರಾಶ್ರಿತರ ಕುಟುಂಬಕ್ಕೆ ಸೇರಿದ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು, ಇವರು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಗ್ರಾಮೀಣ ಅಭ್ಯರ್ಥಿ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿಹೊಂದಿದ (Discharge Certificate) ಬಗೆಗಿನ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

- ಅಂಗವಿಕಲ ಅಭ್ಯರ್ಥಿಗಳು ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಕಂಪ್ಯೂಟರ್ ಜ್ಞಾನ (ಬೇಸಿಕ್) ಹೊಂದಿರುವ ಬಗ್ಗೆ ಪ್ರಮಾಣ ಪತ್ರ

(ಈ ಮೇಲ್ಕಾಣಿಸಿದ ಪ್ರಮಾಣ ಪತ್ರಗಳನ್ನು ಸರ್ಕಾರ ನಿಗದಿಪಡಿಸಿ ನಮೂನೆಯಲ್ಲಿ ಅಭ್ಯರ್ಥಿಗಳು ನಿಗದಿತ ದಿ: 4.11.2015ರ ಒಳಗಾಗಿ ಹೊಂದಿರತಕ್ಕದ್ದು ಹಾಗೂ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಮೆರಿಟ್ ಮೇಲೆ ಆಯ್ಕೆ ಅಗುವ ಅಭ್ಯರ್ಥಿಗಳು ಪರಿಶೀಲನೆಗೆ ನಿಗದಿಪಡಿಸುವ ದಿನಾಂಕದಂದು ಹಾಜರುಪಡಿಸತಕ್ಕದ್ದು)

14. **ಸಾಮಾನ್ಯ ಸೂಚನೆಗಳು :**

1. ನೈತಿಕ ದುರ್ನಡತೆಯಿಂದಾಗಿ / ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ / ಕೇಂದ್ರ/ಸ್ಥಳೀಯ ಸಂಸ್ಥೆ ಕಚೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ಸೇವೆಯಿಂದ ವಜಾ ಮಾಡಲ್ಪಟ್ಟಿದ್ದು ಕಂಡುಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
2. ಅರ್ಜಿಯಲ್ಲಿ ತಪ್ಪು /ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಪ್ರಯತ್ನ ಮಾಡಿರುವುದು ಪ್ರಾಧಿಕಾರದ ಗಮನಕ್ಕೆ ಬಂದ ತಕ್ಷಣ ಅಂತಹ ಅಭ್ಯರ್ಥಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸಲಾಗುವುದು.
3. ಅರ್ಜಿಯಲ್ಲಿ ನೀಡುವ ವಿಳಾಸ ಹಾಗೂ ಮೊಬೈಲ್ ಸಂಖ್ಯೆ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಲಾಗುವುದು.
4. ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಗೊಂಡ ದಿನಾಂಕದಿಂದ 15 ದಿನಗಳವರೆಗೆ ಅಭ್ಯರ್ಥಿಗಳಿಂದ ಆಕ್ಷೇಪಣೆ ಸ್ವೀಕರಿಸಲಾಗುವುದು. ನಂತರದಲ್ಲಿ ಬಂದ ಆಕ್ಷೇಪಣೆಗಳನ್ನು ತಿರಸ್ಕರಿಸಲಾಗುವುದು.
5. ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.
6. ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು http://davanagere.nic.in ಪ್ರಕಟಿಸಲಾಗುವುದು. ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ ಪರಿಶೀಲನೆಗೆ ಹಾಜರಾಗಲು ಪ್ರತ್ಯೇಕವಾಗಿ ಪತ್ರ ವ್ಯವಹಾರ ಈ ಪ್ರಾಧಿಕಾರದಿಂದ ಮಾಡಲಾಗುವುದಿಲ್ಲ. ಅಭ್ಯರ್ಥಿಗಳು ವೆಬ್‌ಸೈಟ್ ಅನ್ನು ಗಮನಿಸತಕ್ಕದ್ದು.
7. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಪ್ರಕಟವಾಗಿದೆ ಎಂಬ ಮಾತ್ರಕ್ಕೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.
8. ಸರ್ಕಾರದಿಂದ ಆಗಿಂದಾಗ್ಗೆ ನೇರ ನೇಮಕಾತಿಯಲ್ಲಿ ಮೀಸಲಾತಿಗೆ ಸಂಬಂಧಿಸಿದಂತೆ ಹೊರಡಿಸಲಾಗುವ ಸುತ್ತೋಲೆ / ಅಧಿಸೂಚನೆ ಅಥವಾ ಸ್ಪಷ್ಟೀಕರಣಗಳನ್ವಯ ಕ್ರಮವಹಿಸಲಾಗುತ್ತದೆ.
9. ಹುದ್ದೆಗಳನ್ನು ಹೆಚ್ಚು ಅಥವಾ ಕಡಿಮೆ ಮಾಡುವ ಅಧಿಕಾರವನ್ನು ಆಯ್ಕೆ ಪ್ರಾಧಿಕಾರವು ಕಾಯ್ದಿರಿಸಿಕೊಂಡಿದೆ.
10. ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ದಾವಣಗೆರೆ ಜಿಲ್ಲಾಧಿಕಾರಿಗಳ ಕಚೇರಿಯ ಅಧಿಕೃತ ವೆಬ್ ಸೈಟ್ http://davanagere.nic.in ಮತ್ತು http://davanagere-va.kar.nic.in ರಲ್ಲಿ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ ಮತ್ತು ಸ್ಪಷ್ಟೀಕರಣ ಅಗತ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ

08192-255118ಗೆ ಸರ್ಕಾರಿ ರಜೆ ದಿನಗಳನ್ನು ಹೊರತುಪಡಿಸಿ ಉಳಿದಂತೆ ಕಚೇರಿಯ ಕೆಲಸದ ವೇಳೆ ಬೆಳಿಗ್ಗೆ 10.00 ರಿಂದ 5.30 ರ ಒಳಗೆ ಸಂಪರ್ಕಿಸಬಹುದಾಗಿದೆ.

11. ಗ್ರಾಮಲೆಕ್ಕಿಗರ ನೇರನೇಮಕಾತಿ ಪ್ರಕ್ರಿಯೆ ಪಾರದರ್ಶಕವಾಗಿ ಮೆರಿಟ್ ಮತ್ತು ರೋಸ್ಟರ್ ನಿಯಮಗಳಂತೆ ನಡೆಸಲಿದ್ದು, ಅಭ್ಯರ್ಥಿಗಳು ಯಾವುದೇ ವ್ಯಕ್ತಿಗಳಿಂದ ಹರಡುವ ವದಂತಿಗಳಿಗೆ ಆಮಿಷಗಳಿಗೆ ಕಿವಿಕೊಡದೇ ಮೇಲೆ ತಿಳಿಸಲಾದ ಸೂಚನೆಗಳನ್ನು ಪಾಲಿಸಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸತಕ್ಕದ್ದು.

(ಎಸ್.ಟಿ.ಅಂಜನ್‌ಕುಮಾರ್)
ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು,
ಗ್ರಾಮಲೆಕ್ಕಿಗರ ನೇರ ನೇಮಕಾತಿ ಪ್ರಾಧಿಕಾರ,
ದಾವಣಗೆರೆ ಜಿಲ್ಲೆ,ದಾವಣಗೆರೆ

ಇವರಿಗೆ :-

1. ಸಂಕಲನಾಧಿಕಾರಿ, ಸರ್ಕಾರಿ ಹೊರವಲಯ ಮುದ್ರಣಾಲಯ, ಆರ್.ವಿ. ಕಾಲೇಜು ಅಂಚೆ, 8ನೇ ಮೇನ್, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು-560 059 ಇವರಿಗೆ ಕಳುಹಿಸುತ್ತಾ ಮೇಲ್ಕಂಡ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಅದರ 100 ಪ್ರತಿಗಳನ್ನು ಜಿಲ್ಲಾಧಿಕಾರಿ,ದಾವಣಗೆರೆ ಜಿಲ್ಲೆ ಇವರಿಗೆ ಒದಗಿಸಲು ಕೋರಲಾಗಿದೆ.

<u>ಪ್ರತಿಯನ್ನು :</u>

1. ಮುಖ್ಯಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಿದೆ.
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, 2ನೆ ಮಹಡಿ, ಬಿಎಂಟಿಸಿ ಕಟ್ಟಡ, ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
4. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ
5. ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಹಾಗೂ ಜಿಲ್ಲಾ ವ್ಯಾಪ್ತಿಯ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್ ರವರ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
6. ಡೆಪ್ಯೂಟಿ ಡೈರೆಕ್ಟರ್ ಜನರಲ್, ರಾಷ್ಟ್ರೀಯ ವಿಜ್ಞಾನ ಸೂಚನಾ ಕೇಂದ್ರ, ವಿ.ವಿ.ಟವರ್, ಡಾ:ಅಂಬೇಡ್ಕರ್ ರಸ್ತೆ, ಬೆಂಗಳೂರು
7. ರಾಷ್ಟ್ರೀಯ ವಿಜ್ಞಾನ ಸೂಚನಾಧಿಕಾರಿ, ರಾಷ್ಟ್ರೀಯ ವಿಜ್ಞಾನ ಸೂಚನಾ ಕೇಂದ್ರ, ದಾವಣಗೆರೆ ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ
8. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ದಾವಣಗೆರೆ ಜಿಲ್ಲೆ
9. ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗ ಅಭಿವೃದ್ಧಿ ಇಲಾಖೆ, ದಾವಣಗೆರೆ ಜಿಲ್ಲೆ
10. ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ದಾವಣಗೆರೆ ಜಿಲ್ಲೆ
11. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ದಾವಣಗೆರೆ ಜಿಲ್ಲೆ
12. ಪ್ರಧಾನ ಅಂಚೆ ಪಾಲಕರು (ಎಸ್‌ಎಸ್‌ಜಿ-1) ಅಂಚೆ ಕಚೇರಿ ಮುಖ್ಯ ಶಾಖೆ, ದಾವಣಗೆರೆ
13. ಉಪವಿಭಾಗಾಧಿಕಾರಿಗಳು,ದಾವಣಗೆರೆ ಉಪವಿಭಾಗ / ಹರಪನಹಳ್ಳಿ ಉಪವಿಭಾಗ ರವರಿಗೆ ಕಚೇರಿಯ ಸೂಚನಾ ಫಲಕದಲ್ಲಿ ಅಧಿಸೂಚನೆಯನ್ನು ಪ್ರಕಟಿಸುವ ಕುರಿತು ಸೂಕ್ತ ಕ್ರಮವಹಿಸಲು ಸೂಚಿಸಿದೆ.
14. ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರ್‌ರು ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಿ ವ್ಯಾಪಕವಾಗಿ ಪ್ರಚಾರ ಮಾಡುವ ಕುರಿತು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ
15. ಸಬ್ ಪೋಸ್ಟ್ ಮಾಸ್ಟರ್, ಅಂಚೆ ಕಚೇರಿ, ಜಿಲ್ಲಾಧಿಕಾರಿಗಳ ಕಚೇರಿ,ದಾವಣಗೆರೆ
16. ಈ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವ ಕುರಿತು
17. ಕಚೇರಿ ಪ್ರತಿ